ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಗ್ರಾಮೀಣ ಭಾಗದಲ್ಲಿ ಶೌಚಾಲಯಗಳ ನಿರ್ಮಾಣ

ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

67(506) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದ ಗ್ರಾಮೀಣ ಭಾಗದಲ್ಲಿ ಶೌಚಾಲಯಗಳನ್ನು ನಿರ್ಮಿಸಲು ಸರ್ಕಾರ ಒದಗಿಸಿರುವ ಸಹಾಯಧನದ ಮೊತ್ತವೆಷ್ಟು; ಈವರೆಗೆ ಎಷ್ಟು ಶೌಚಾಲಯಗಳು ನಿರ್ಮಾಣಗೊಂಡಿವೆ;

(ಆ) ಈ ಪೈಕಿ ವೈಯಕ್ತಿಕ ಶೌಚಾಲಯಗಳೆಷ್ಟು; ಸಮುದಾಯ ಶೌಚಾಲಯಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಶೌಚಾಲಯಗಳ ನಿರ್ಮಾಣಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಿಡುಗಡೆ ಮಾಡಿರುವ ಮತ್ತು ಖರ್ಚಾಗಿರುವ ಹಣವೆಷ್ಟು?